ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

22

ಇಲಾಖೆ / ವಿಷಯ : DEPARTMENT / SUBJECT: ಕೃಷಿ [illegible]

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 19/2/21

## ಕೃಷಿ ಕಾಯಿದೆಗಳ ವಿರುದ್ಧ ರಾಜ್ಯದ ಹಲವೆಡೆ ರೈಲು ನಿಲ್ದಾಣಗಳಲ್ಲಿ ಪ್ರತಿಭಟನೆ

# ರೈತರಿಂದ ರೈಲು ತಡೆಗೆ ಯತ್ನ

■ **ವಿಕ ಸುದ್ದಿಲೋಕ** ಬೆಂಗಳೂರು 19/2/21

ದಿಲ್ಲಿಯ ರೈತರ ಹೋರಾಟ ಬೆಂಬಲಿಸಿ ನಗರದ ಯಶವಂತಪುರ ರೈಲು ನಿಲ್ದಾಣದಲ್ಲಿ ಗುರುವಾರ ರೈಲು ತಡೆಯಲು ಮುಂದಾದ ರೈತ ಮುಖಂಡ ಕುರುಬೂರು ಶಾಂತಕುಮಾರ್ ಮತ್ತಿತರರನ್ನು ಪೊಲೀಸರು ಬಂಧಿಸಿ ಬಿಡುಗಡೆಗೊಳಿದರು.

ರಾಷ್ಟ್ರೀಯ ಸಂಯುಕ್ತ ಕಿಸಾನ್ ಮೋರ್ಚಾ ಕರೆ ಮೇರೆಗೆ ರೈತ, ದಲಿತ, ಕಾರ್ಮಿಕ 'ಐಕ್ಯ' ಹೋರಾಟ ಸಮಿತಿಯಿಂದ ರಾಜ್ಯಾದ್ಯಂತ ಗುರುವಾರ ರೈಲು ತಡೆ ಚಳವಳಿ ಹಮ್ಮಿಕೊಳ್ಳಲಾಗಿತ್ತು. ಯಶವಂತಪುರ ರೈಲು ನಿಲ್ದಾಣದಲ್ಲಿ ರೈಲು ತಡೆಯಲು ಮುಂದಾದ ಬೆರಳೆಣಿಕೆಯಷ್ಟು ರೈತರನ್ನು ಪೊಲೀಸರು ತಡೆದರು. ಈ ವೇಳೆ ರೈತ ಮುಖಂಡ ಕುರುಬೂರು ಶಾಂತಕುಮಾರ್ ಮತ್ತು ಪೊಲೀಸರ ನಡುವೆ ವಾಗ್ವಾದ ನಡೆಯಿತು. ಆದರೆ, ರೈತರು ಪೊಲೀಸರ ಮನವೊಲಿಕೆಗೆ ಜಗ್ಗದೆ ರೈಲು ನಿಲ್ದಾಣದೊಳಗೆ ನುಗ್ಗಿದರು.

ಪ್ಲಾಟ್‌ಫಾರಂ ಒಳಗೆ ಹೋದ ರೈತರು ರೈತ ವಿರೋಧಿ ಕಾಯಿದೆಗಳನ್ನು ಜಾರಿಗೊಳಿಸಿರುವ ಕೇಂದ್ರ ಸರಕಾರದ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. 'ಬೇಡವೇ ಬೇಡ, ಸುಗ್ರೀವಾಜ್ಞೆ ಕಾನೂನು ಬೇಡ' ಎಂದು ರೈಲಿನ ಮುಂಭಾಗದಲ್ಲಿ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಈ ವೇಳೆ ಯಶವಂತಪುರ ಪೊಲೀಸ್ ಠಾಣೆ ಸಹಾಯಕ ಪೊಲೀಸ್ ಆಯುಕ್ತ ಶ್ರೀನಿವಾಸ ರೆಡ್ಡಿ ಹಾಗೂ ಸಿಬ್ಬಂದಿ ರೈತರನ್ನು ಬಂಧಿಸಿ ಕರೆದೊಯ್ದರು.

**ರೈಲಿನಲ್ಲೇ ಬಂದ ಕುರುಬೂರು:** ಪ್ರತಿಭಟನೆ ಮಾಡಲೆಂದೇ ಮೈಸೂರಿನಿಂದ ರೈಲಿನಲ್ಲೇ ಯಶವಂತಪುರಕ್ಕೆ ಬಂದಿಳಿದು ನಿಲ್ದಾಣದೊಳಗೆ ಚಳವಳಿ ನಡೆಸಲು ಕುಳಿತಿದ್ದ ಕುರುಬೂರು ಶಾಂತಕುಮಾರ್ ಅವರನ್ನು ಆರಂಭದಲ್ಲಿ ಪೊಲೀಸರು ಸುತ್ತುವರಿದು ಬಲವಂತವಾಗಿ ನಿಲ್ದಾಣದಿಂದ ಹೊರಗೆ ಕರೆದೊಯ್ದರು.



ರೈತರ ಹೋರಾಟ ಬೆಂಬಲಿಸಿ ರಾಜ್ಯದ ರೈತ-ದಲಿತ- ಕಾರ್ಮಿಕ ಐಕ್ಯ ಹೋರಾಟ ಸಮಿತಿಯಿಂದ ಯಶವಂತಪುರ ರೈಲು ನಿಲ್ದಾಣದಲ್ಲಿ ಪ್ರತಿಭಟನೆ ನಡೆಸಲಾಯಿತು. ಕುರುಬೂರು ಶಾಂತಕುಮಾರ್ ಮತ್ತಿತರರು ಇದ್ದರು.



ಹಾವೇರಿ ನಗರದ ಹುತಾತ್ಮ ಮೈಲಾರ ಮಹಾದೇವಪ್ಪ ರೈಲ್ವೆ ನಿಲ್ದಾಣದಲ್ಲಿ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಜಿಲ್ಲಾ ಘಟಕದ ರೈತ ಮುಖಂಡರು ಕೃಷಿ ಕಾಯಿದೆ ವಿರೋಧಿಸಿ ಸಾಂಕೇತಿಕ ಪ್ರತಿಭಟನೆ ನಡೆಸಿದರು.

ಈ ವೇಳೆ ಶಾಂತಕುಮಾರ್ ಮಾತನಾಡಿ, ''ಹೋರಾಟಗಾರರ ಮೇಲೆ ಪೊಲೀಸರು ದಬ್ಬಾಳಿಕೆ ಮಾಡುವುದು ಸರಿಯಲ್ಲ, ಪ್ರಧಾನ ಮಂತ್ರಿಗಳು ಕಾರ್ಪೊರೇಟ್ ಕಂಪನಿಗಳ ಮರ್ಜಿಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಇನ್ನಾದರೂ ಎಚ್ಚೆತ್ತುಕೊಂಡು ದೇಶದ ರೈತರ ಹಿತರಕ್ಷಣೆಗಾಗಿ ದುಡಿಯಬೇಕು. ರೈತ ವಿರೋಧಿ ಕಾನೂನುಗಳನ್ನು ವಾಪಸ್ ಪಡೆಯಬೇಕು. ಪ್ರಧಾನಿಗಳು ರಾಜ್ಯಸಭೆಯಲ್ಲಿ ತಿಳಿಸಿರುವಂತೆ ಕೂಡಲೇ ಚಳವಳಿನಿರತ ರೈತ ಮುಖಂಡರ ಜತೆ ಮಾತುಕತೆ ನಡೆಸಿ ಸಮಸ್ಯೆ ಬಗೆಹರಿಸಬೇಕು. ರೈತರಿಗೆ ಬೇಕಾದ ಶಾಸನಬದ್ಧ ಕನಿಷ್ಠ ಬೆಂಬಲ ಬೆಲೆ ಖಾತ್ರಿ ಕಾನೂನು ಜಾರಿಗೊಳಿಸಲು ಮುಂದಾಗಬೇಕು. ರೈತರಿಗೆ ಬೇಡದ ಕಾನೂನುಗಳನ್ನು ವಾಪಸ್ ಪಡೆಯಬೇಕು. ಇಲ್ಲದಿದ್ದರೆ ಹೋರಾಟ ಮತ್ತಷ್ಟು ತೀವ್ರಗೊಳಿಸಬೇಕಾಗುತ್ತದೆ'' ಎಂದು ಎಚ್ಚರಿಕೆ ನೀಡಿದರು.

ರೈಲು ನಿಲ್ದಾಣಕ್ಕೆ ಪ್ರವೇಶಿಸುವ ಎಲ್ಲ ದ್ವಾರಗಳಲ್ಲೂ ಪೊಲೀಸ್ ಬಿಗಿ ಭದ್ರತೆ ಏರ್ಪಡಿಸಲಾಗಿತ್ತು. ಪ್ರತಿಭಟನೆಗೆ ಆಗಮಿಸಿದ ಬೆರಳೆಣಿಕೆಯ ರೈತರನ್ನು ನಿಲ್ದಾಣದ ಒಳಗೆ ಹೋಗಲು ಬಿಡದಂತೆ ತಡೆದು ಕಟ್ಟುನಿಟ್ಟಿನ ಎಚ್ಚರ ವಹಿಸಲಾಗಿತ್ತು.

### ಹುಬ್ಬಳ್ಳಿ, ಧಾರವಾಡ, ಬೆಳಗಾವಿಯಲ್ಲಿ ಪ್ರತಿಭಟನೆ

**ಹುಬ್ಬಳ್ಳಿ:** ಹುಬ್ಬಳ್ಳಿ ನಗರದ ಶ್ರೀ ಸಿದ್ಧಾರೂಢ ಸ್ವಾಮೀಜಿ ರೈಲ್ವೆ ನಿಲ್ದಾಣದಲ್ಲಿ ರೈಲ್ವೆ ರೋಕೋ ಹೋರಾಟಕ್ಕೆ ಮುಂದಾದ ಕರ್ನಾಟಕ ಕಳಸಾ ಬಂಡೂರಿ ರೈತ ಹೋರಾಟ ಸಮಿತಿ ಕಾರ್ಯಕರ್ತರು, ರೈತ ಹೋರಾಟಗಾರರು ರೈಲು ನಿಲ್ದಾಣದ ಎದುರು ಕೆಲ ಹೊತ್ತು ಪ್ರತಿಭಟನೆ ನಡೆಸಿದರು.

ಧಾರವಾಡ ರೈಲು ನಿಲ್ದಾಣದಲ್ಲಿ ರೈಲು ತಡೆಯಲು ಮಂದಾದ ಪ್ರತಿಭಟನಾಕಾರರನ್ನು ಪೊಲೀಸರು ಬಂಧಿಸಿ, ಬಿಡುಗಡೆಗೊಳಿಸಿದರು. ಆರ್‌ಕೆಎಸ್, ಎಐಟಿಯುಸಿ ಸೇರಿದಂತೆ ವಿವಿಧ ರೈತ ಸಂಘಟನೆಗಳ ಮುಖಂಡರು ಹಾಗೂ ಪೊಲೀಸರ ಮಧ್ಯೆ ಮಾತಿನ ಚಕಮಕಿ ನಡೆಯಿತು. ಹಾವೇರಿ ನಗರದ ಹುತಾತ್ಮ ಮೈಲಾರ ಮಹಾದೇವಪ್ಪ ರೈಲು ನಿಲ್ದಾಣದಲ್ಲಿ ಪ್ರತಿಭಟನೆ ನಡೆಯಿತು.

ಬೆಳಗಾವಿಯಲ್ಲಿ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಮತ್ತು ಭಾರತೀಯ ಕೃಷಿಕ ಸಮಾಜದ ಮುಖಂಡರು ಗುರುವಾರ ನಗರದ ರೈಲ್ವೆ ನಿಲ್ದಾಣದಲ್ಲಿ ರೈಲು ತಡೆ ಚಳವಳಿ ಹಮ್ಮಿಕೊಂಡಿದ್ದರು. ನಿಲ್ದಾಣದೊಳಗೆ ಪ್ರವೇಶಿಸುವುದನ್ನು ಪೊಲೀಸರು ತಡೆದರು. ಮಾತಿನ ಚಕಮಕಿ ಉಂಟಾಗಿ ನೂಕುನುಗ್ಗಲಿನಲ್ಲಿ ರೈತನೊಬ್ಬ ನೆಲಕ್ಕೆ ಬಿದ್ದ ಘಟನೆ ನಡೆಯಿತು.

ವಿಜಯಪುರದಲ್ಲಿ ಸಂಯುಕ್ತ ಕಿಸಾನ್ ಮೋರ್ಚಾ ರೈತ ಸಂಘರ್ಷ ಸಮನ್ವಯ ಸಮಿತಿ ಆಶ್ರಯದಲ್ಲಿ ನಾನಾ ಸಂಘಟನೆಗಳ ಪದಾಧಿಕಾರಿಗಳು ನಗರದ ರೈಲು ನಿಲ್ದಾಣದಲ್ಲಿ ಪ್ರತಿಭಟನೆ ನಡೆಸಿ ಬಸವ ಎಕ್ಸ್‌ಪ್ರೆಸ್ ರೈಲು ತಡೆಯಲು ಯತ್ನ ನಡೆಯಿತು.